I/110401/2024

ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,–590001
OFFICE OF THE DEPUTY COMMISSIONER, BELAGAVI DISTRICT, BELAGAVI -590001
ದೂರವಾಣಿ : 0831- 2407200, 2407273 Email: deo.belagavi@gmail.com
Telephone:

---

ಸಂ: ಸಿಎಎಲ್/ವಿವ-14/2024-25 ದಿನಾಂಕ: 24-7-2024

ವಿಷಯ: ಬೆಳಗಾವಿ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಬೆಳಗಾವಿ ಖಾನಾಪೂರ, ಬೈಲಹೊಂಗಲ, ಕಿತ್ತೂರ, ಚಿಕ್ಕೋಡಿ ಹಾಗೂ ನಿಪ್ಪಾಣಿ ತಾಲೂಕುಗಳಲ್ಲಿಯ ಅಂಗನವಾಡಿ, ಶಾಲಾ- ಕಾಲೇಜು, ಮುಂತಾದ ಶೈಕ್ಷಣಿಕ ಸಂಸ್ಥೆಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ: 1. ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ ಇವರ ಪತ್ರ ಸಂ: ಇ1/ಎಲ್ಎ ಎಲ್ ಕ್ಯೂ/2042/2023-24 ದಿನಾಂಕ: 24.07.2024.
2. ಉಪ ನಿರ್ದೇಶಕರು, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ, ಬೆಳಗಾವಿ ಇವರ ಪತ್ರ ಸಂ: ಪಪೂಶಿಇ/ಉನಿಬೆ/ಇ2/2024-25 ದಿನಾಂಕ: 23.07.2024.
3. ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್)

*******

**ಪ್ರಸ್ತಾವನೆ:**

ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ ಇವರು ಪತ್ರ ಸಲ್ಲಿಸಿ, ಧಾರಕಾರವಾಗಿ ಮಳೆಯು ಸುರಿಯುತ್ತಿರುವುರಿಂದ ಶಾಲೆಗಳಲ್ಲಿ ಮಳೆ ನೀರು ಹರಿದು ಮತ್ತು ಹಲವಾರು ಶಾಲಾ ಕಟ್ಟಡಗಳು ಸೋರುತ್ತಿರುವುದರಿಂದ ವಿದ್ಯಾರ್ಥಿಗಳು ಶಾಲೆಗೆ ಹೋಗಲು ಸಾಧ್ಯವಗದೇ ಇರುವುದರಿಂದ ದಿನಾಂಕ: 25.07.2024 ಮತ್ತು 26.07.2024 ರಂದು ಎರಡು ದಿನ ಬೆಳಗಾವಿ, ಖಾನಾಪೂರ, ಬೈಲಹೊಂಗಲ, ಕಿತ್ತೂರ ಚಿಕ್ಕೋಡಿ ಮತ್ತು ನಿಪ್ಪಾಣಿ ತಾಲೂಕುಗಳಲ್ಲಿಯ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ರಜೆಯನ್ನು ನೀಡುವಂತೆ ವಿನಂತಿಸಿರುತ್ತಾರೆ ಹಾಗೂ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಇವರು ಪತ್ರ ಸಲ್ಲಿಸಿ, ಕಳೆದ ನಾಲ್ಕೈದು ದಿನಗಳಿಂದ ಬೆಳಗಾವಿ, ಖಾನಾಪೂರ, ಬೈಲಹೊಂಗಲ, ಕಿತ್ತೂರ ತಾಲ್ಲೂಕುಗಳಲ್ಲಿ ವ್ಯಾಪಕವಾಗಿ ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ಬೆಳಗಾವಿ, ಖಾನಾಪೂರ, ಬೈಲಹೊಂಗಲ ಮತ್ತು ಕಿತ್ತೂರ ತಾಲೂಕುಗಳಲ್ಲಿಯ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 25.07.2024 ಮತ್ತು 26.07.2024 ರಂದು ಎರಡು ದಿನ ರಜೆಯ ಆದೇಶ ನೀಡುವಂತೆ ಕೋರಿರುತ್ತಾರೆ

ಜಿಲ್ಲೆಯ ಬೆಳಗಾವಿ, ಖಾನಾಪೂರ, ಬೈಲಹೊಂಗಲ ಮತ್ತು ಕಿತ್ತೂರ ತಾಲೂಕುಗಳಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದ ಶಾಲಾ ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34(ಎಮ್) ರಡಿ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಗೆ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ, ಖಾನಾಪೂರ, ಬೈಲಹೊಂಗಲ ಕಿತ್ತೂರ, ಚಿಕ್ಕೋಡಿ ಮತ್ತು ನಿಪ್ಪಾಣಿ ತಾಲ್ಲೂಕುಗಳಾದ್ಯಂತ ಅಂಗನವಾಡಿ,, ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಫ್ರೌಢ ಶಾಲೆಗಳಿಗೆ ಮತ್ತು ಬೆಳಗಾವಿ, ಖಾನಾಪೂರ, ಬೈಲಹೊಂಗಲ ಮತ್ತು ಕಿತ್ತೂರ ತಾಲ್ಲೂಕುಗಳಾದ್ಯಂತ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 25.07.2024 ಮತ್ತು 26.07.2024 ರಂದು ರಜೆ ಘೋಷಿಸುವ ಕುರಿತು ಈ ಕೆಳಗಿನಂತೆ ಆದೇಶ ಮಾಡಿದೆ.

**ಆದೇಶ**

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) ರಡಿ ಪ್ರದತ್ತವಾದ ಅಧಿಕಾರದ ಮೇರೆಗೆ **ಬೆಳಗಾವಿ ಜಿಲ್ಲೆಯ ಬೆಳಗಾವಿ, ಖಾನಾಪೂರ, ಬೈಲಹೊಂಗಲ,ಕಿತ್ತೂರ, ಚಿಕ್ಕೋಡಿ ಮತ್ತು ನಿಪ್ಪಾಣಿ ತಾಲ್ಲೂಕುಗಳಾದ್ಯಂತ ಅಂಗನವಾಡಿ, ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಫ್ರೌಢ ಶಾಲೆಗಳಿಗೆ ಮತ್ತು ಬೆಳಗಾವಿ, ಖಾನಾಪೂರ, ಬೈಲಹೊಂಗಲ ಮತ್ತು ಕಿತ್ತೂರ ತಾಲ್ಲೂಕುಗಳಾದ್ಯಂತ ಪದವಿ ಪೂರ್ವ ಕಾಲೇಜುಗಳಿಗೆ ದಿನಾಂಕ: 25.07.2024 ಮತ್ತು 26.07.2024 ರಂದು ರಜೆ ಘೋಷಿಸಿ ಆದೇಶಿಸಿದೆ.**

I/110401/2024

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

Signed by
Mohammad Roshan
Date: 24-07-2024 18:55:57

**ಜಿಲ್ಲಾಧಿಕಾರಿ ಹಾಗೂ ಅದ್ಯಕ್ಷರು**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ :**

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ
2. ಪೋಲಿಸ್ ಅಧೀಕ್ಷಕರು, ಬೆಳಗಾವಿ.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ
4. ಉಪವಿಬಾಗಾಧಿಕಾರಿಗಳು, ಬೆಳಗಾವಿ/ಬೈಲಹೊಂಗಲ/ಚಿಕ್ಕೋಡಿ
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ
6. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ
7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
8. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾದ್ಯಮಗಳಲ್ಲಿ ಪ್ರಕಟಿಸುವ ಕುರಿತು.
9.. ತಹಶೀಲ್ದಾರ, ಬೆಳಗಾವಿ, ಖಾನಾಪೂರ, ಬೈಲಹೊಂಗಲ, ಕಿತ್ತೂರ ಚಿಕ್ಕೋಡಿ ಮತ್ತು ನಿಪ್ಪಾಣಿ

Signed by
Vijaykumar Honakeri
Date: 24-07-2024 18:54:41

**ಅಪರ ಜಿಲ್ಲಾಧಿಕಾರಿಗಳು**
**ಬೆಳಗಾವಿ ಜಿಲ್ಲೆ, ಬೆಳಗಾವಿ**